## ದಿನಾಂಕ: 17/09/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BWSSB |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-135 | BESCOM |
| 3 | ಶ್ರೀ. ಸತೀಶ್‌ಕುಮಾರ್.ಎ | ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ: 135 | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 4 | ಶ್ರೀ. ಶ್ರೀನಿವಾಸ್‌ಮೂರ್ತಿ | ಕಂದಾಯ ವಸೂಲಿಗಾರರು, ವಾರ್ಡ್ ಸಂಖ್ಯೆ: 135 | ಆರೋಗ್ಯ ವೈಧ್ಯಾಧಿಕಾರಿಗಳು |
| 5 | ಶ್ರೀ. ವೆಂಕಟರಾಮ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀಮತಿ. ಸುಧಾ.ಎಸ್ | ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | |
| 7 | ಶ್ರೀ. ಭಾರ್ಗವ್ ಎಸ್ | ಮಾರ್ಷಲ್ | |
| 8 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | |
| 9 | ಶ್ರೀ. ಬಾಲಾಜಿ.ಎಂ.ಎಸ್ | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಘನತ್ಯಾಜ್ಯ ನಿರ್ವಹಣೆಯು SOP ಪಾಲಿಸದಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯು ಕಾರ್ಯಾದೇಶದ ಕರಾರಿನನ್ವಯ SOP ಯನ್ನು ಪಾಲಿಸದೇ ಇರುವುದರಿಂದ ಘನತ್ಯಾಜ್ಯ ನಿರ್ವಹಣೆಯು ಸಮರ್ಪಕವಾಗಿ ನಿರ್ವಹಣೆಯಾಗದಿರುವ ಬಗ್ಗೆ ಸಭೆಯಲ್ಲಿ ದೂರು ಸಲ್ಲಿಸಿರುವ ಮೇರೆಗೆ ಸಂಬಂಧಪಟ್ಟ ಅಧಿಕಾರಿಯು ಪರಿಶೀಲಿಸಿ ಟೆಂಡರ್ ಕರಾರಿನಂತೆ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (SWM) |

...ಪ್ರ.ತಿ.ನೋ

Scanned by CamScanner

| | | | |
|---|---|---|---|
| 2 | ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಣಿಜ್ಯ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಅನಧಿಕೃತವಾಗಿ ವಾಣಿಜ್ಯ ಚಟುವಟಿಕೆಗಳು ಹೆಚ್ಚಾಗುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ವಾಣಿಜ್ಯ ಚಟುವಟಿಕೆಗಳಿಂದ ಉತ್ಪತ್ತಿಯಾಗುತ್ತಿರುವ ತ್ಯಾಜ್ಯ ಹೆಚ್ಚಾಗುತ್ತಿದ್ದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿರುವುದರಿಂದ ವಾಣಿಜ್ಯ ಚಟುವಟಿಕೆಗಳಿಗೆ ಪರವಾನಗಿ ನೀಡಿರುವ ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಆರೋಗ್ಯ ವೈದ್ಯಾಧಿ. (ಚಾಮರಾಜಪೇಟೆ ವಿಭಾಗ) |
| 3 | ರಸ್ತೆ ಗುಂಡಿ ಮುಚ್ಚುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದ ಹಾಗೂ BWSSB ಒಳಚರಂಡಿ ದುರಸ್ಥಿ ಕಾಮಗಾರಿಗಳಿಂದ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇದನ್ನು ಮುಚ್ಚಲು ಅಗತ್ಯ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |
| 4 | ಪಾದರಾಯನಪುರ ಮುಖ್ಯರಸ್ತೆಯಲ್ಲಿ ಪಾರ್ಕಿಂಗ್ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಪಾದರಾಯನಪುರ ಮುಖ್ಯಸ್ತೆಯಲ್ಲಿ ವಾಹನಗಳ ಪಾರ್ಕಿಂಗ್ ನ್ನು ಸಮ ಬೆಸ ಮಾದರಿಯಲ್ಲಿ ಅಳವಡಿಸಲು ಪೊಲೀಸ್ ಸಂಚಾರಿ ಇಲಾಖೆಗೆ ಪತ್ರ ಬರೆದು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಪೊಲೀಸ್ ಸಂಚಾರಿ ವಿಭಾಗ |
| 5 | ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ಕಂಪನಿಗಳಿಗೆ ಮತ್ತು Mutton & Beaf Stall ಗಳಿಗೆ ನೋಟೀಸ್ ನೀಡುವ ಬಗ್ಗೆ. | ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ಉದ್ಯಮಗಳು ಮತ್ತು Mutton & Beaf Stall ಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ನಿಯಾಮಾನುಸಾರ ವಿಲಾಎವಾರಿ ಮಾಡದೆ ಅನಧೀಕೃತವಾಗಿ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ವಿಲೇವಾರಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ದೂರುಗಳು ನೀಡಿರುವುದರಿಂದ ಸಣ್ಣ ಕೈಗಾರಿಕಾ ಉದ್ಯಮಗಳು ಮತ್ತು Mutton & Beaf Stall ಗಳ ಮಾಲೀಕರಿಗೆ ಆರೋಗ್ಯ ವೈದ್ಯಾಧಿಕಾರಿಗಳ ಮೂಲಕ ನೋಟೀಸ್ ಜಾರಿ ಮಾಡುವಂತೆ ಸಭೆಯಲ್ಲಿ ತಿಳಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ) ಮತ್ತು ಪಶುಪಾಲನಾ ವಿಭಾಗ |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

Scanned by CamScanner

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner